# ಕರ್ನಾಟಕ ಲೋಕಾಯುಕ್ತ

ಸಂಖ್ಯೆ: ಕಂಪ್ಲೆಂಟ್/ಉಪಲೋಕ್/ಬಿಡಿ.501/2011/ಸನಿಕಾಸ-2

ಬಹುಮಹಡಿಗಳ ಕಟ್ಟಡ,
ಡಾ॥ಬಿ.ಆರ್.ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ:3.7.2017.

## ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(1)ರ ಅನ್ವಯ ವರದಿ

**ವಿಷಯ:-** ದೂರುದಾರರಿಗೆ ಸರ್ಕಾರದಿಂದ ಮಂಜೂರಾದ ದೇವನಹಳ್ಳಿ ತಾಲ್ಲೂಕು ಕಸಬಾ ಹೋಬಳಿ ದೇವನಹಳ್ಳಿ ಗ್ರಾಮದ ಸರ್ವೆ ನಂ.193 ಕ್ಷೇತ್ರ 2 ಎಕರೆ ಜಮೀನನ್ನು ತಾಲ್ಲೂಕು ಕ್ರೀಡಾಂಗಣಕ್ಕೆ ಉಪಯೋಗಿಸುತ್ತಿದ್ದು ಜಿಲ್ಲಾಧಿಕಾರಿಗಳು ಅಧಿಕೃತ ಜ್ಞಾಪನಪತ್ರ ಹೊರಡಿಸಿ ಸದರಿ ಜಮೀನು ಸ್ವಾಧೀನಪಡಿಸಿಕೊಂಡಿರುವುದರಿಂದ ದೂರುದಾರರಿಗೆ ಬದಲಿ ನಿವೇಶನ ನೀಡಲು ಸೂಕ್ತ ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟವರಿಗೆ ನಿರ್ದೇಶನ ನೀಡುವ ಬಗ್ಗೆ.

-----

ಶ್ರೀ ಎಂ.ಪಿ.ಪ್ರಕಾಶ್, ಮರಳುಬಾಗಿಲು, ದೇವನಹಳ್ಳಿ, (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ (1) ತಹಶೀಲ್ದಾರ್, ದೇವನಹಳ್ಳಿ, (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ:-**

ದೂರುದಾರರು ತಮ್ಮ ದೂರಿನಲ್ಲಿ ದೇವನಹಳ್ಳಿ ತಾಲ್ಲೂಕು ಕಸಬಾ ಹೋಬಳಿ ದೇವನಹಳ್ಳಿ ಗ್ರಾಮದ ಸರ್ವೆ ನಂ.193 ಕ್ಷೇತ್ರ 2 ಎಕರೆ ಜಮೀನು ತಮಗೆ ಸರ್ಕಾರದಿಂದ ದಿ.18.7.1994ರಂದು ಮಂಜೂರಾಗಿರುತ್ತದೆ. ಆದರೆ ಈ ಜಮೀನನ್ನು ತಾಲ್ಲೂಕು ಕ್ರೀಡಾಂಗಣಕ್ಕೆ ಕಾಯ್ದಿರಿಸಿ ಬದಲಿ ನಿವೇಶನ ನೀಡುವುದಾಗಿ ದೂರುದಾರರಿಗೆ ತಿಳಿಸಿ ಜಮೀನು ಸ್ವಾಧೀನಪಡಿಸಿಕೊಂಡಿದ್ದು ಇರುತ್ತದೆ. ಆದರೆ ಆನಂತರ ಎದುರುದಾರರು ದೂರುದಾರರಿಗೆ ಬದಲಿ ನಿವೇಶನ ನೀಡುವ ವ್ಯವಸ್ಥೆ ಮಾಡಿರುವುದಿಲ್ಲ. ಆದ್ದರಿಂದ ಈ ಬಗ್ಗೆ ಪರಿಶೀಲಿಸಿ ತನಗೆ ಬದಲಿ ನಿವೇಶನ ನೀಡಲು ಆದೇಶಿಸಬೇಕೆಂದು ಕೋರಿ ದೂರು ಸಲ್ಲಿಸಿದ್ದಾರೆ.

3. ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ದೂರುದಾರರ ಜಮೀನನ್ನು ಮಾನ್ಯ ಜಿಲ್ಲಾಧಿಕಾರಿಗಳ ಅಧಿಕೃತ ಜ್ಞಾಪನಸಂಖ್ಯೆ ಎಲ್.ಎನ್.ಡಿ.ಸಿ.ಆರ್.18/2005–06 ದಿ.2.5.2005ರಂತೆ ಸರ್ವೆ ನಂ.193ರಲ್ಲಿ 12 ಎಕರೆ 21 ಗುಂಟೆ ಜಮೀನನ್ನು ತಾಲ್ಲೂಕು ಕ್ರೀಡಾಂಗಣಕ್ಕೆ ಕಾಯ್ದಿರಿಸಿ ಆದೇಶ ನೀಡಿರುತ್ತಾರೆ. ಅದರಲ್ಲಿ ದೂರುದಾರರ ಜಮೀನು ಸಹ ಸೇರಿದ್ದು, ಆನಂತರ ತಾಲ್ಲೂಕು ಬಗರ್ ಹುಕುಂ ಸಮಿತಿಯ ನಡವಳಿ ದಿ.30.11.2012ರಂದು ಲಕ್ಷ್ಮಮ್ಮ ಕೋಂ.ಗೋಪಾಲಪ್ಪ ಅವರಿಗೆ ಸರ್ವೆ ನಂ.193ರಲ್ಲಿ 34 ಗುಂಟೆ ಜಮೀನು ಮಂಜೂರು ಮಾಡಲು ಸಮಿತಿಯು ತೀರ್ಮಾನಿಸಿರುತ್ತದೆ. ಆದ್ದರಿಂದ ಸದರಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೇಳಿಕೊಂಡಿದ್ದಾರೆ.

4. ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ದೂರಿನ ಅಂಶಗಳನ್ನು ಪುನರುಚ್ಚರಿಸಿರುತ್ತಾರೆ.

5. ದೂರುದಾರರು ಸಲ್ಲಿಸಿದ ದೂರು, ಆಕ್ಷೇಪಣೆ, ಪ್ರತ್ಯುತ್ತರ ಮತ್ತು ದಾಖಲೆಗಳನ್ನು ಪರಿಶೀಲಿಸಿದಾಗ, ದೂರುದಾರರಿಗೆ ಸರ್ವೆ ನಂ.193 ಕ್ಷೇತ್ರ 2 ಎಕರೆ ಜಮೀನು ಸರ್ಕಾರದಿಂದ ಮಂಜೂರಾಗಿದ್ದು, ಆದರೆ ಅದು ತಾಲ್ಲೂಕು ಕ್ರೀಡಾಂಗಣಕ್ಕೆ ಉಪಯೋಗಿಸುತ್ತಿರುವುದರಿಂದ ಅದಕ್ಕೆ ಬದಲಿ ನಿವೇಶನ ನೀಡುವುದಾಗಿ ಮಾನ್ಯ ಜಿಲ್ಲಾಧಿಕಾರಿಗಳು ಅಧಿಕೃತ ಜ್ಞಾಪನಪತ್ರ ಹೊರಡಿಸಿ ಜಮೀನು ಸ್ವಾಧೀನಪಡಿಸಿಕೊಂಡಿರುತ್ತಾರೆ. ಆದರೆ ಇದುವರೆಗೆ ಅವರಿಗೆ ಬದಲಿ ಜಮೀನು ನೀಡಿರುವುದಿಲ್ಲ.

6. ದಿ.1.12.2013ರಂದು ಗೌರವಾನ್ವಿತ ಉಪಲೋಕಾಯುಕ್ತರು ದೇವನಹಳ್ಳಿ ಪಟ್ಟಣದಲ್ಲಿ ಹಮ್ಮಿಕೊಂಡ ಸಾರ್ವಜನಿಕ ಅಹವಾಲು ಕಾರ್ಯಕ್ರಮದಲ್ಲಿ ಈ ವಿಷಯದ ಬಗ್ಗೆ ಪರಿಶೀಲಿಸಿ ದೂರುದಾರರಿಗೆ ಬದಲಿ ನಿವೇಶನ ಮಂಜೂರುಮಾಡಿ 1 ತಿಂಗಳಲ್ಲಿ ವರದಿ ಸಲ್ಲಿಸುವಂತೆ ತಹಶೀಲ್ದಾರ್ ಮತ್ತು ಉಪವಿಭಾಗಾಧಿಕಾರಿಗಳಿಗೆ ಆದೇಶಿಸಿದ್ದರು. ಆದರೆ ಇದುವರೆಗೆ ದೂರುದಾರರಿಗೆ ಬದಲಿ ನಿವೇಶನ ನೀಡಿರುವುದಿಲ್ಲ. ದೂರುದಾರರು ನ್ಯಾಯಯುತವಾಗಿ ಅವರು ಕಳೆದುಕೊಂಡ ಜಮೀನಿನ ಬದಲಿಗೆ ಬದಲಿ ನಿವೇಶನ ನೀಡುವಂತೆ ಇದುವರೆಗೆ ಸಾಕಷ್ಟು ಮನವಿ ಸಲ್ಲಿಸಿದರೂ ಸಹ ಎದುರುದಾರರು ಅವರಿಗೆ ಬದಲಿ ನಿವೇಶನ ನೀಡುವ ವ್ಯವಸ್ಥೆ ಮಾಡಿರುವುದಿಲ್ಲ.

7. ಆದ್ದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(1)ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ, ದೂರುದಾರರಿಗೆ ಸರ್ವೆ ನಂ.193 ಕ್ಷೇತ್ರ 2 ಎಕರೆ ಸರ್ಕಾರದಿಂದ ಮಂಜೂರಾದ ಜಮೀನು ತಾಲ್ಲೂಕು ಕ್ರೀಡಾಂಗಣಕ್ಕೆ ಉಪಯೋಗಿಸುತ್ತಿದ್ದು ಜಿಲ್ಲಾಧಿಕಾರಿಗಳು ಅಧಿಕೃತ ಜ್ಞಾಪನಪತ್ರ ಹೊರಡಿಸಿ ಸದರಿ ಜಮೀನು ಸ್ವಾಧೀನಪಡಿಸಿಕೊಂಡಿರುವುದರಿಂದ ಅದಕ್ಕೆ ದೂರುದಾರರಿಗೆ ಬದಲಿ ನಿವೇಶನ ನೀಡಲು ಸೂಕ್ತ ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟವರಿಗೆ **ನಿರ್ದೇಶನ ನೀಡಲು** ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ.

8. ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(2)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಒಂದು ತಿಂಗಳೊಳಗೆ ವರದಿ ಸಲ್ಲಿಸಲು ಕೋರಲಾಗಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

3/7/17.

**[ ನ್ಯಾಯಮೂರ್ತಿ ಸುಭಾಷ್ ಬಿ ಅಡಿ]**
**ಉಪಲೋಕಾಯುಕ್ತರು,**
**ಕರ್ನಾಟಕ ರಾಜ್ಯ.**